ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"2000ದ ಕರ್ನಾಟಕ ಧನ ವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತ್ತು ಮತ್ತು ಅನುಮತಿ ನೀಡಲಾಯಿತು

ಶ್ರೀ ಎಸ್.ಎಂ.ಕೃಷ್ಣ (ಮುಖ್ಯಮಂತ್ರಿ ಹಾಗೂ ಅರ್ಥ ಸಚಿವರು) : ಮಾನ್ಯ ಅಧ್ಯಕ್ಷರೆ, "2000 ಕರ್ನಾಟಕ ಧನ ವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ."

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

(ii) ಕರ್ನಾಟಕ ತೆರಿಗೆ ಕಾನೂನುಗಳ (ತಿದ್ದುಪಡಿ) ವಿಧೇಯಕ, 2000)

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಸ್.ಎಂ.ಕೃಷ್ಣ (ಮಾನ್ಯ ಮುಖ್ಯಮಂತ್ರಿ ಹಾಗೂ ಅರ್ಥಸಚಿವರು) : ಮಾನ್ಯ ಅಧ್ಯಕ್ಷರೆ, "2000ದ ಕರ್ನಾಟಕ ತೆರಿಗೆ ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾವವೇನೆಂದರೆ 2000ದ ಕರ್ನಾಟಕ ತೆರಿಗೆ ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತ್ತು ಮತ್ತು ಅನುಮತಿ ನೀಡಲಾಯಿತು

ಶ್ರೀ ಎಸ್.ಎಂ.ಕೃಷ್ಣ (ಮುಖ್ಯಮಂತ್ರಿ ಹಾಗೂ ಅರ್ಥ ಸಚಿವರು) : ಮಾನ್ಯ ಅಧ್ಯಕ್ಷರೆ, 2000 ಕರ್ನಾಟಕ ತೆರಿಗೆ ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ಅನುಬಂಧ (ii) ರಲ್ಲಿ ವಿಧೇಯಕವನ್ನು ಮಂಡಿಸಲಾಗಿದೆ.

(iii) (ಕರ್ನಾಟಕ ಸ್ಟಾಂಪು ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕ, 2000)

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಹೆಚ್.ಸಿ. ಶ್ರೀಕಂಠಯ್ಯ (ಕಂದಾಯ ಸಚಿವರು) : ಮಾನ್ಯ ಅಧ್ಯಕ್ಷರೆ, ಕರ್ನಾಟಕ ಸ್ಟಾಂಪು ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕ 2000. ಮಂಡಿಸಲು ಸಭೆಯ ಅನುಮತಿಯನ್ನು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"2000ದ ಕರ್ನಾಟಕ ಸ್ಟಾಂಪು ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು."